# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

18 ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಇಲಾಖೆ / ವಿಷಯ : DEPARTMENT / SUBJECT: ಗೋಹತ್ಯೆ ನಿಷೇಧ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 11-12-2020

---

**ಗೋಹತ್ಯೆ ನಿಷೇಧಕ್ಕಾಗಿ ಸುಗ್ರೀವಾಜ್ಞೆಯೋ ಅಧಿವೇಶನವೋ**

# ಕಲಾಪ ಅನಿರ್ದಿಷ್ಟ ಅವಧಿಗೆ ಮುಂದೂಡಿಕೆ

ಪ್ರಜಾವಾಣಿ ವಾರ್ತೆ 11-12-20

ಬೆಂಗಳೂರು: ಕೇವಲ ನಾಲ್ಕು ದಿನಗಳು ನಡೆದ ವಿಧಾನಮಂಡಲದ ಚಳಿಗಾಲದ ಅಧಿವೇಶನದ ಕಲಾಪವನ್ನು ಗುರುವಾರ ಅನಿರ್ದಿಷ್ಟ ಅವಧಿಗೆ ಮುಂದೂಡಲಾಯಿತು.

ಈ ಬಾರಿ ವಿಧಾನಸಭೆಯಲ್ಲಿ ಪ್ರಮುಖವಾಗಿ ಗೋಹತ್ಯೆ ನಿಷೇಧ ಮಸೂದೆ, ಬಿಬಿಎಂಪಿ ಮಸೂದೆ, ವಿಶ್ವವಿದ್ಯಾಲಯಗಳ ತಿದ್ದುಪಡಿ ಮಸೂದೆ ಅಂಗೀಕಾರಗೊಂಡವು. ವಿಧಾನಪರಿಷತ್ತಿನಲ್ಲಿ ಎಪಿಎಂಸಿ ತಿದ್ದುಪಡಿ ಮಸೂದೆ ಮತ್ತು ಭೂಸುಧಾರಣಾ ತಿದ್ದುಪಡಿ ಮಸೂದೆಗಳಿಗೆ ಒಪ್ಪಿಗೆ ಸಿಕ್ಕಿತು. ಇವೆರಡಕ್ಕೂ ಜೆಡಿಎಸ್ ಬೆಂಬಲ ವ್ಯಕ್ತಪಡಿಸಿತ್ತು. ಆದರೆ, ಪರಿಷತ್ತಿನಲ್ಲಿ ಗೋಹತ್ಯೆ ನಿಷೇಧ ಮಸೂದೆ ಮಂಡನೆಯಾಗಲಿಲ್ಲ.

ಗ್ರಾಮ ಪಂಚಾಯಿತಿ ಚುನಾವಣೆಯನ್ನು ಮುಂದಿಟ್ಟುಕೊಂಡು ಮತಗಳಿಕೆಯ ಲೆಕ್ಕಾಚಾರ ಹಾಕಿರುವ ಆಡಳಿತಾರೂಢ ಬಿಜೆಪಿ, ಗೋಹತ್ಯೆ ನಿಷೇಧ ಮಸೂದೆಯನ್ನು ತಂದೇ ತೀರುವ ಚಿಂತನೆ ನಡೆಸಿದೆ.

ಕಲಾಪ ಅನಿರ್ದಿಷ್ಟ ಅವಧಿಗೆ ಮತ್ತೆ ಮುಂದೂಡಿರುವುದರಿಂದಾಗಿ ಪರಿಷತ್ತಿನಲ್ಲಿ ಈ ಮಸೂದೆಗೆ ಅಂಗೀಕಾರ ಪಡೆಯಲು ಆಗಿಲ್ಲ. ಈಗಿರುವ ದಾರಿ ಎಂದರೆ ಸುಗ್ರೀವಾಜ್ಞೆ ತರುವುದು ಅಥವಾ ರಾಜ್ಯಪಾಲರ ಅನುಮತಿ ಪಡೆದು ವಿಶೇಷ ಅಧಿವೇಶನದ ಕರೆದು ಅಂಗೀಕಾರ ಪಡೆಯುವುದು. ಗುರುವಾರವಷ್ಟೇ ಕಲಾಪ ಮುಕ್ತಾಯಗೊಂಡಿರುವುದರಿಂದ ಮತ್ತೆ ವಿಶೇಷ ಅಧಿವೇಶನ ಕರೆಯಲು ರಾಜ್ಯಪಾಲರು ಸಮ್ಮತಿಸಿದರೆ ಡಿ.15ರ ಮಂಗಳವಾರ ಅಧಿವೇಶನ ನಡೆಸಲು ಸರ್ಕಾರ ಚಿಂತನೆ ನಡೆಸಿದೆ. ಒಂದು ವೇಳೆ ರಾಜ್ಯಪಾಲರು ಒಪ್ಪಿಗೆ ನೀಡದೇ ಇದ್ದರೆ ಸುಗ್ರೀವಾಜ್ಞೆ ಮೂಲಕ ಕಾಯ್ದೆ ಜಾರಿಗೊಳಿಸುವ ಚಿಂತನೆ ಸರ್ಕಾರದ ಮುಂದಿದೆ ಎಂದು ಮೂಲಗಳು ಹೇಳಿವೆ.

## ಬಿಜೆಪಿ ಸದಸ್ಯರ ಕಾಲೆಳೆದ ಹೊರಟ್ಟಿ



ಬೆಂಗಳೂರು: '105 ಶಾಸಕರನ್ನು ಇರಿಸಿಕೊಂಡು ವಿರೋಧ ಪಕ್ಷದಲ್ಲಿ ಇದ್ದಿದ್ದರೆ ಸರಿ ಇತ್ತು. ಈ ಕಡೆಯಿಂದ 17 ಜನರನ್ನು ಕರ್ಕೊಂಡು ಹೋಗಿ ಸರ್ಕಾರ ಮಾಡದಿದ್ದರೆ ಈಗಿರುವ ತಲೆಬಿಸಿಗಳೆಲ್ಲಾ ಇರುತ್ತಿದ್ದವಾ' ಎಂದು ಜೆಡಿಎಸ್ ನಾಯಕ ಬಸವರಾಜ ಹೊರಟ್ಟಿ ಅವರು ಗುರುವಾರ ವಿಧಾನ ಪರಿಷತ್ತಿನಲ್ಲಿ ಬಿಜೆಪಿ ಸದಸ್ಯರನ್ನು ಪ್ರಶ್ನಿಸಿದರು.

ಪೂರಕ ಅಂದಾಜುಗಳ ಮೇಲಿನ ಚರ್ಚೆಯ ವೇಳೆ ಬಿಜೆಪಿ ಸರ್ಕಾರ ರಚನೆಯಾದ ಬೆಳವಣಿಗೆಯನ್ನು ಪ್ರಸ್ತಾಪಿಸಿದ ಅವರು, 'ಕಸರತ್ತು ಮಾಡಿ ಸರ್ಕಾರ ರಚಿಸಿ ಇಲ್ಲದ ಉಸಾಬರಿ ಮೈಮೇಲೆ ಎಳ್ಕೊಂಡಿರಿ. ಈ ಕಡೆಯಿಂದ ಹೋದವರಿಗೆಲ್ಲಾ ಸಚಿವ ಸ್ಥಾನ ಬಿಟ್ಟು ಕೊಟ್ಟಿರಿ. ಮೂಲ ಬಿಜೆಪಿಯವರನ್ನು ಸಮಾಧಾನ ಮಾಡೋಕೆ ದಿನಕ್ಕೊಂದು ನಿಗಮ, ಮಂಡಳಿ ರಚಿಸುತ್ತಿದ್ದೀರಿ. ಇದೆಲ್ಲಾ ಬೇಕಿತ್ತಾ' ಎಂದು ಕೇಳಿದರು.

ಈಗಲೇ ವಾಂತಿ ಬರುವಷ್ಟು ನಿಗಮ, ಮಂಡಳಿಗಳಿವೆ. ಇನ್ನೆಷ್ಟು ನಿಗಮ, ಮಂಡಳಿ ಮಾಡುತ್ತೀರಿ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವಿರೋಧ ಪಕ್ಷದ ನಾಯಕ ಎಸ್.ಆರ್. ಪಾಟೀಲ ಅವರೂ ಹಲವು ಬಾರಿ, 'ಆಪರೇಷನ್ ಕಮಲ ಮಾಡಿ ಸರ್ಕಾರ ಮಾಡಿದ್ದೀರಿ' ಎಂದು ಬಿಜೆಪಿಯವರನ್ನು ಹಂಗಿಸಿದರು.